ಶ್ರೀ ಎನ್. ಚಲುವರಾಯಸ್ವಾಮಿ, (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) 27 ಹಿರಿಯ ನೇತ್ರ ಸಹಾಯಕರ ಸೇವೆಯನ್ನು ಜಿಲ್ಲಾ ಆಸ್ಪತ್ರೆ ಹಾಗೂ ಜಿಲ್ಲಾ ಮಟ್ಟದ ಆಸ್ಪತ್ರೆಗಳಿಗೆ ಸೀಮಿತವಾಗಿರುವುದು ನಿಜ.

ಆ) ಅವರುಗಳ ಸೇವೆಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ತಲುಪುವಂತೆ ಮಾಡುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದರೆ, ಆ ಬಗ್ಗೆ ತೆಗೆದುಕೊಂಡ ಕ್ರಮಗಳೇನು:

ಆ) ಹೌದು.

ಈ ವಿಷಯವನ್ನು ಪರಿಶೀಲಿಸಲಾಗುತ್ತಿದೆ.

ಇ) ಪರಿಶೀಲಿಸಲಾಗುತ್ತಿದೆ.

5774 (6503) ಶ್ರೀ ಕೃಷ್ಣಯ್ಯ ಶೆಟ್ಟಿ ಎಸ್. ಎನ್. (ಮಾಲೂರು): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ರಾಷ್ಟ್ರೀಯ ಅಂಧತ್ವ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ 4 ಮುಖ್ಯ ನೇತ್ರ ಸಹಾಯಕರ ಸೇವೆಯನ್ನು ಬೆಂಗಳೂರು ನಗರಕ್ಕೆ ಮಾತ್ರ ಸೀಮಿತಗೊಳಿಸಿರುವುದು ನಿಜವೇ

ಆ) ಹಾಗಿದ್ದರೆ ಅವರುಗಳ ಸೇವೆಯನ್ನು ರಾಜ್ಯದ ಎಲ್ಲಾ ಜನರಿಗೆ ತಲುಪುವಂತೆ ಈ ಹುದ್ದೆಗಳನ್ನು ಸ್ಥಳಾಂತರಿಸಿ 4 ವಿಭಾಗಕ್ಕೆ ವಿಸ್ತರಿಸುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ:

ಇ) ಬಂದಿದ್ದರೆ ಆ ಬಗ್ಗೆ ತೆಗೆದುಕೊಂಡ ಕ್ರಮವೇನು.

ಈ) ಎಷ್ಟು ದಿನಗಳಲ್ಲಿ ಇವರ ಸೇವೆಯನ್ನು ಎಲ್ಲಾ ವಿಭಾಗಕ್ಕೆ ಒದಗಿಸಲಾಗುವುದು?

ಶ್ರೀ ಎನ್. ಚಲುವರಾಯಸ್ವಾಮಿ, (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) 4. ಮುಖ್ಯ ನೇತ್ರ ಸಹಾಯಕರ ಸೇವೆಯನ್ನು ಬೆಂಗಳೂರು ನಗರಕ್ಕೆ ಸೀಮಿತಗೊಳಿಸಿದೆ. ಹೌದು.

ಆ) ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಪರಿಶೀಲಿಸಲಾಗುತ್ತಿದೆ.

ಈ) ಪರಿಶೀಲನೆಯಲ್ಲಿದೆ.

5775 (6514) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ (ಬಸವ ಕಲ್ಯಾಣ): ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ಸರ್ಕಾರವು ಫಾರ್ಮಸಿ ಶಿಕ್ಷಣ ವ್ಯವಸ್ಥೆಗಾಗಿ ಕೈಗೊಂಡ ಕ್ರಮಗಳೇನು;

ಆ) ಎಷ್ಟು ಸರ್ಕಾರಿ ಮತ್ತು ಖಾಸಗಿ ಫಾರ್ಮಸಿ ಶಿಕ್ಷಣ ಸಂಸ್ಥೆಗಳು ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿವೆ;

ಇ) ಇದರಲ್ಲಿ ಪ್ರಸಕ್ತ ಸಾಲಿನಲ್ಲಿ ಎಷ್ಟು ಜನ ವಿದ್ಯಾರ್ಥಿಗಳಿಗೆ ಶಿಕ್ಷಣಾವಾಕಾಶ ಮಾಡಿಕೊಡಲಾಗಿದೆ; (ಕಾಲೇಜುಗಳ/ಜಿಲ್ಲಾವಾರು ವಿವರ ನೀಡುವುದು);

ಈ) ಫಾರ್ಮಸಿ ಶಿಕ್ಷಣಕ್ಕೆ ಕೇಂದ್ರ ಸರ್ಕಾರದ ನೇರವುಗಳೇನಾದರೂ ಇವೆಯೇ: ಇದ್ದಲ್ಲಿ; ವಿವರ ನೀಡುವುದು;